ನಾವು ಬಾಯಿರಿ ಮೇಡಂ ಮನೀಗೆ ಹೊಂಟೀವಿ' ಅನ್ನಾಣ, 'ಬಾಯಿರಿ ಮೇಡಂ ಮನೀಗ? ಹೋಗರಿ ಹೋಗರಿ' ಅಂದರಂತ. 'ಲಾ ಇವನ! ಈಕಿಗಿ ಪೊಲೀಸ್ ಡಿಪಾರ್ಟ್‌ಮೆಂಟಿನ್ಯಾಗೂ ಶಿಷ್ಯರದಾರಲ್ಲ' ಅಂತ ಆಶ್ಚರ್ಯಪಟ್ಟ ಅವನು.

◆ ಬದಾಮಿ ಸೀಮೆಯ ವಿಶೇಷತೆಯೇನು?

ಇಲ್ಲಿ ಮಣ್ಣು ಗಾಳಿ ಎಷ್ಟು ಛಲೋ ಅದೇರಿ. ಬಸವಣ್ಣ ಆಳಿದ ಈ ನಾಡದ್ಯಲ್ಲ, ಭಾಳ ಒಳ್ಳೇ ನಾಡು. ಅವನ ಜಂಗಮ ತತ್ವ ಏನದ್ಯಲ್ಲ ವಂಡರ್‌ಫುಲ್. ಇಲ್ಲಿನ ಜನ ಹಡಸೀಮಗನ, ಬೋಸುಡಿಕೆ, ನಿನ್ನೌನ, ಹುಚ್ಚುಪ್ಯಾಲಿ ಅಂತ ಬೈದಾಡ್ತಾರ. 'ಏ ಕಸಬರಗಿ, ಬಾಯಿಲ್ಲಿ' ಅಂತ ತಾಯಿ ಮಗನ್ನ ಕರೀತಾಳ. ಗೆಳೆಯರು, 'ಏ ಹುಚ್ಚಬರಗಿ ಅದೀಯಲೇ ಮಗನಾ' ಅಂತಾರ. ಬೇಕಾದ್ದು ಜಗಳಾಡಲಿ, ಮತ್ತ ತೆಕ್ಕೆಬಡದು ಒಂದಾಗಿ ಬಿಡ್ತಾರ. ನಮ್ಮನೀಗೆ ಒಬ್ಬಾಕಿ ಮುಸಲೋರ ಹೆಂಗಸು, ಬಾಗವಾನರಾಕಿ ಹೂ ಮಾರಕೊಂಡು ಬರತಾಳ. ಒಂದಿವಸ, 'ಎಷ್ಟು ಮಕ್ಕಳಬೇ?' ಅಂತ ಕೇಳಿದೆ. 'ಮೂರು' ಅಂದಳು. 'ಲಗ್ನ ಎಲ್ಲಿಗೆ ಮಾಡಿಕೊಟ್ಟಿ?' ಅಂದೆ. 'ಇಲ್ರೀ, ಹಿರೇಮಗಳು ನರ್ಸಿಂಗ ಮುಗಿಸ್ಯಾಳರಿ, ಬಿಎಎಂಎಸ್‌ಗೆ ಹಚ್ಚೀನ್ರಿ. ಎರಡನೇ ಮಗಳು ಪ್ಯಾರಾ ಮೆಡಿಕಲ್ ಓದಲಿಕ್ಕೆ ಹತ್ಯಾಳ. ಮೂರನೇ ಮಗಳು ಬಿ.ಎಸ್ಸಿ. ಅಗ್ರಿ' ಅಂದಳು. ಎದೆ ಝಲ್ ಅಂದುಬಿಡ್ತು. ಬರೇ ಹೊಲದಾಗ ಕೂಲಿ ಮಾಡಿ ಓದಿಸ್ಯಾಳ, ವರ್ಷಕ್ಕ ಒಂದೊಂದ ಲಕ್ಷ ಫೀಸು ತುಂಬಿ. ಮತ್ತ ಮೂರೂ ಮಂದಿ ಮೆರಿಟಿನ್ಯಾಗ ಸೀಟು ತಗೊಂಡಾರ. 'ಭೂಮಿತಾಯೀಗೆ ನನ್ನ ಬಣ್ಣ ಕೊಟ್ಟೀನ್ರಿ. ಆಕಿ ಬಣ್ಣ ನಾನು ತಗೊಂಡೀನ್ರೀ' ಅಂದಳು. (ರೋಹಿಣಿಯವರು 'ಅಂದರ ಬಿಸಿಲಾಗ ದುಡದುಡದ ಕರ್‍ರಗ್ಯಾಗಾಳ ಅಂತ' ಎಂದು ವಿವರಿಸಿದರು). ಈ ಭಾಷೆ ಈ ಜೀವನತತ್ವದ ಮುಂದೆ ಯಾವ ಭಗವದ್ಗೀತೆ, ರಾಮಾಯಣಾರಿ? ಮೂರು ಹೆಣ್ಮಕ್ಕಳನ್ನ ಓದಸೋದು ಕಮ್ಮಿಯೇನರಿ? ನಮ್ಮ ಕರಾವಳಿ ಮಂದಿ ಏಟ್ಟಿ ಇರ್ತಾರ. ತಾವಾತು ತಮ್ಮದಾತು. ಅಷ್ಟು ಓಪನ್ ಇರಂಗಿಲ್ಲ. ಇಲ್ಲಿನ ಮಂದಿ ಓಪನ್. ಪ್ರಾಮಾಣಿಕರು. ಹೆಣ್ಮಕ್ಕಳಲ್ಲಿ ನಾವು ಕಂಡಿದ್ದು ಪಾಸಿಟಿವಿನೆಸ್. ಗಂಡ ಕುಡುಕಿರಲಿ ಹಡಕಿರಲಿ ಬೇಕಾದ್ದಿರಲಿ. 'ನಮ್ಮ ರಟ್ಯಾಗ ಶಕ್ತಿ ಐತಿ, ದುಡದ ತಿಂತೀವಿ ಬಿಡ್ರಿ' ಅಂತಾರ. 'ದುಡಕೊಂಡು ಒಯ್ದಿರ್ತೀವಿ. ಅದ್ರಾಗೂ ಕುಡಿಯಾಕ ರೊಕ್ಕ ಕೇಳ್ತಾರ ಭ್ಯಾಡ್ಯಾಗಳು' ಅಂತಾರ. 'ಬಾಯಾರೇ, ನಿಮ್ಮ ಜಲಮ ತಣ್ಣಗೈತ್ರಿ. ಗಂಡರ ಕಾಟಿಲ್ಲ, ಮುಂಜಾಲೆದ್ದು ನಿಮ್ಮ ಮಾರಿ ನೋಡಬೇಕ್ರಿ. ನಮಗ ಮೊದಲೇ ತಿಳೀಲಿಲ್ಲರಿ. ನಿಮ್ಮಂಗ ಇರತಿದ್ದಿವಿ' ಅಂತಾರ. ಮಾತು ಕೃತಿ ಆಚರಣೆ ವೈವಿಧ್ಯ ಎಲ್ಲವೂ ಅವರ ಜೀವನದೊಳಗದ. ಸಾಮಾನ್ಯ ಜನಪದರು ಬಳಸೋ ಭಾಷೆ ಅದೆಯಲ್ಲ, ಅದು ನಿಜವಾದ ಜೀವಂತಿಕೆಯ ಭಾಷೆ. ಭಾಷೆ ಹೇಳಿಕೊಟ್ರೆ ಬೆಳೆಯೋಲ್ಲ. ತಾನಾ ಭೂಮಿಯಿಂದ ಅರಳಬೇಕು. ಲೇಖಕರಾದವರು ಜನಪದದೊಳಗೆ ಬೆರೀಬೇಕು. ಆಮೇಲೆ ಪ್ರಜ್ಞೆಯಿಟ್ಟುಕೊಂಡು ಬರೀಬೇಕು.

◆ ನೀವು ರಂಜಾನ ಕೊರ್ತಿ ಅನ್ನೋ ಹುಡುಗನ್ನ ಸಾಕಿದಿರಿ. ಅವನ ಮೇಲೆ 'ಧರೆಗಿಳಿದ ನಕ್ಷತ್ರ' ಅಂತ ಕತೇನೂ ಬರೆದಿರಿ. ಅವನು ಸಾಯೊ ಕಾಲಕ್ಕ ದವಾಖಾನೆಗೆ ಖರ್ಚು ಮಾಡಿದಿರಿ. ಅವನ ವಿಶೇಷತೆಯೇನು?

ಅಂವಾ ಪೇಪರ್ ಏಜೆಂಟಿದ್ದ. ಟಿ.ಎಸ್. ವೆಂಕಣ್ಣಯ್ಯನವರಿಂದ ಹಿಡಿದು ಇಲ್ಲೀತನಕ ಯಾರ್‍ಯಾರು ಬರದಾರ ಅಷ್ಟರದ್ದೂ ಓದಿದ್ದ. ನನಗೆ ಬೇಕಾದ ಪುಸ್ತಕ–ಪೇಪರ್ ಎಲ್ಲೇ ಇದ್ದರೂ ತಂದುಕೊಡ್ತಿದ್ದ. ತೇಜಸ್ವಿ–ಬೆಳಗೆರೇದು ಲೈನ್‌ಲೈನ್ ಬಾಯಿಪಾಠ ಹೇಳ್ತಿದ್ದ. ಬೇಂದ್ರೆ ಕಾವ್ಯವಂತೂ ಬಾಯಾಗೇ ಇತ್ತು. ಥೇಟ್ ರಾಜಕುಮಾರ್ ಮಾತಾಡ್ದಂಗೇ ಮಾತಾಡೋನು. 'ಲೇ ಸಾಲೀ ಮುಂದೆ ಹಾಯ್ದಲೆ